ಆ) ಪ್ರಸ್ತುತ, ಈ ಕೆಳಕಂಡ ಹಿರಿಯ / ಮೋಟಾರು ವಾಹನ ನಿರೀಕ್ಷಕರು ಕರ್ತವ್ಯಲೋಪ ಆರೋಪ ಎದುರಿಸುತ್ತಿದ್ದಾರೆ.

1) ಶ್ರೀ ಎ.ಪಿ.ಎನ್.ರಾವ್, ಹಿ.ಮೋ.ವಾ.ನಿ.,

2) ಶ್ರೀ ಕೆ.ಹೆಚ್.ಕೃಷ್ಣರಾಜ್, --ಮೋ.ವಾ.ನಿ.,

ಇ) ಸದರಿ ಪ್ರಕರಣಗಳು ಇನ್ನೂ ವಿಚಾರಣಾ ಹಂತದಲ್ಲಿವೆ. ಅಂತಿಮ ವಿಚಾರಣಾ ವರದಿಯನ್ನಾಧರಿಸಿ ಮುಂದಿನ ಕ್ರಮ ಜರುಗಿಸಲಾಗುವುದು.

ಈ) ಹೌದು.

ಉ) ಆರೋಪ ಸಾಬೀತಾಗದ ಹೊರತು ನೌಕರರ ವಿರುದ್ಧ ಯಾವುದೇ ಕ್ರಮ ಜರುಗಿಸಲು ಬರುವುದಿಲ್ಲ. ಕಾರಣ, ಅಂತಹ ನೌಕರರಿಗೆ ಇತರೆ ನೌಕರರಂತೆ ಕೆಲಸಗಳನ್ನು ನಿರ್ವಹಿಸಲು ಕರ್ತವ್ಯ ಹಂಚಿಕೆ ಮಾಡಲಾಗುತ್ತದೆ.

ಹಾಸನ ಜಿಲ್ಲೆಯಲ್ಲಿ ಆರೋಗ್ಯ ಇಲಾಖೆಯಲ್ಲಿ ಖಾಲಿಯಿರುವ ಹುದ್ದೆಗಳು

421 (16) ಶ್ರೀ ಮಂಜು.ಎ. (ಅರಕಲಗೂಡು) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಾಸನ ಜಿಲ್ಲೆಯಲ್ಲಿ ಆರೋಗ್ಯ ಇಲಾಖೆಯಲ್ಲಿ ವಿವಿಧ ದರ್ಜೆಯ ಎಷ್ಟು ಹುದ್ದೆಗಳು ಖಾಲಿಯಿವೆ; ಹುದ್ದೆಗಳ ವಿವರ ನೀಡುವುದು;

ಆ) ಇದರಲ್ಲಿ ಅರಕಲಗೂಡು ಚುನಾವಣೆ ಕ್ಷೇತ್ರಕ್ಕೆ ಸಂಬಂಧಪಟ್ಟ ವಿವರ ನೀಡುವುದು;

ಇ) ಈ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರಕಾರ ಯಾವ ಕ್ರಮ ಕೈಗೊಂಡಿದೆ?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಹಾಸನ ಜಿಲ್ಲೆಯಲ್ಲಿ 371 ವಿವಿಧ ವೃಂದದ ವೈದ್ಯಾಧಿಕಾರಿಗಳ ಹುದ್ದೆಗಳು ಮಂಜೂರಾಗಿದ್ದು 220 ವೈದ್ಯಾಧಿಕಾರಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ. 151 ವೈದ್ಯಾಧಿಕಾರಿಗಳ ಹುದ್ದೆಗಳು ಖಾಲಿ ಇವೆ.

2712 ಸಿಬ್ಬಂದಿಗಳ ಹುದ್ದೆಗಳು ಮಂಜೂರಾಗಿದ್ದು 1579 ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ. 1133 ಹುದ್ದೆಗಳು ಖಾಲಿ ಇವೆ.

ಆ) ಅರಕಲಗೂಡು ಚುನಾವಣಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಹುದ್ದೆಗಳವಾರು ಮಾಹಿತಿಯನ್ನು ಅನುಬಂಧ–1 ರಲ್ಲಿ ನೀಡಲಾಗಿದೆ.

ಇ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಕುರಿತಂತೆ ಸರ್ಕಾರ ಕೈಗೊಂಡಿರುವ ಕ್ರಮಗಳ ವಿವರಗಳನ್ನು ಅನುಬಂಧ–2 ರಲ್ಲಿ ನೀಡಲಾಗಿದೆ.

ಪ್ರಶ್ನೆ ಸಂಖ್ಯೆ : 16

ಅರಕಲಗೂಡು (ಹಾಸನ ಜಿಲ್ಲೆ) ವಿಧಾನ ಸಭಾ ಕ್ಷೇತ್ರದ ಆರೋಗ್ಯ ಇಲಾಖೆಯ ಸಿಬ್ಬಂದಿ ವಿವರ

ಅನುಬಂಧ – 1

ಕ್ರಮ ಸಂಖ್ಯೆ	ಹುದ್ದೆ ವಿವರ	ಮಂಜೂರಾತಿ	ಕಾರ್ಯ ನಿರತ	ಖಾಲಿ	ಷರಾ
1	ತಾಲ್ಲೂಕು ಆರೋಗ್ಯ ಅಧಿಕಾರಗಳು	1	0	1	
2	ತಜ್ಞ ವೈದ್ಯರು	12	4	8	
3	ಸಾಮಾನ್ಯ ಕರ್ತವ್ಯ ನಿರತ ವೈದ್ಯರು	29	20	9	
4	ದಂತ ಆರೋಗ್ಯಾಧಿಕಾರಿಗಳು	2	0	2	
5	ಸಹಾಯಕ ಆಡಳಿತಾಧಿಕಾರಿಗಳು	1	0	1	
6	ಕಛೇರಿ ಅಧೀಕ್ಷಕರು	0	0	0	
7	ಶುಶ್ರೂಷಕರು	25	12	13	
8	ಹಿರಿಯ ಫಾರ್ಮಸಿಸ್ಟ್	3	2	1	
9	ಫಾರ್ಮಸಿಸ್ಟ್	18	5	13	
10	ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳು	1	0	1	

11	ಹಿರಿಯ ಆರೋಗ್ಯ ಸಹಾಯಕರು (ಪುರುಷ)	6	4	2	
12	ಹಿರಿಯ ಆರೋಗ್ಯ ಸಹಾಯಕರು (ಮಹಿಳೆ)	6	6	0	
13	ಕಿರಿಯ ಪುರುಷ ಆರೋಗ್ಯ ಸಹಾಯಕರು	28	11	17	
14	ಕಿರಿಯ ಮಹಿಳಾ ಆರೋಗ್ಯ ಸಹಾಯಕರು	56	44	12	
15	ವಾಹನ ಚಾಲಕರು	11	10	1	
16	ನೇತ್ರ ಸಹಾಯಕರು	2	2	0	
17	ಕ್ಷ-ಕಿರಣ ತಂತ್ರಜ್ಞರು	2	1	1	
18	ಹಿರಿಯ ಪ್ರಯೋಗ ಶಾಲಾ ತಂತ್ರಜ್ಞರು	1	0	1	
19	ಕಿರಿಯ ಪ್ರಯೋಗ ಶಾಲಾ ತಂತ್ರಜ್ಞರು	10	9	1	
20	ಪ್ರಥಮ ದರ್ಜೆ ಸಹಾಯಕರು	7	3	4	
21	ದ್ವಿತೀಯ ದರ್ಜೆ ಸಹಾಯಕರು	8	5	3	
22	ಗ್ರೂಪ್ 'ಡಿ'	90	50	40	
		319	**188**	**131**	

ಅನುಬಂಧ – 2

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ವಿವಿಧ ವೃಂದಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ತೆಗೆದುಕೊಂಡಿರುವ/ತೆಗೆದುಕೊಳ್ಳಲಿರುವ ಕ್ರಮಗಳ ವಿವರ

1. ತಜ್ಞ ವೈದ್ಯರ ಖಾಲಿ ಹುದ್ದೆಗಳನ್ನು 2010 ರಲ್ಲಿ ಸ್ನಾತಕೋತ್ತರ ವ್ಯಾಸಂಗ ಮುಗಿಸಿ ಬರುವ ವೈದ್ಯರಿಗೆ ಸ್ಥಳನಿಯುಕ್ತಿ ಮಾಡುವ ಮೂಲಕ ಆದ್ಯತಾನುಸಾರ ಭರ್ತಿ ಮಾಡಲು ಕ್ರಮವಹಿಸಲಾಗುವುದು.
2. (1) ಮಕ್ಕಳ ತಜ್ಞರು, (2) ಅರವಳಿಕೆ ತಜ್ಞರು ಹಾಗೂ (3) ಸ್ತ್ರೀರೋಗ ತಜ್ಞರುಗಳ ಕೊರತೆಯನ್ನು ನೀಗಿಸಲು ಮಾಸಿಕ ಗರಿಷ್ಟ ರೂ.50,000 ರವರೆಗೆ ಗೌರವ ಧನ ನೀಡಿ ನೇಮಕ ಮಾಡಿಕೊಳ್ಳಲು ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನದ (ಎನ್.ಆರ್. ಹೆಚ್.ಎಂ.) ಅಡಿ ಅವಕಾಶ ಕಲ್ಪಿಸಲಾಗಿದೆ. ಹಾಗೂ ಇದೇ ಯೋಜನೆಯಡಿ ಪ್ರಕರಣವಾರು ಆಧಾರದ ಮೇಲೆ ಪ್ರತೀ ಪ್ರಕರಣವೊಂದಕ್ಕೆ (1) ಮಕ್ಕಳ ತಜ್ಞರಿಗೆ ರೂ. 500, (2) ಅರೆವಳಿಕೆ ತಜ್ಞರಿಗೆ ರೂ.1,000 ಹಾಗೂ (3) ಸ್ತ್ರೀರೋಗ ತಜ್ಞರಿಗೆ ರೂ.1,500 ರಂತೆ ನೀಡಲು ಸಹ ಅವಕಾಶ ಕಲ್ಪಿಸಲಾಗಿದೆ.
3. ಕರ್ನಾಟಕ ಆರೋಗ್ಯ ಪದ್ಧತಿ ಅಭಿವೃದ್ಧಿ ಸುಧಾರಣಾ ಯೋಜನೆ (ಕೆ.ಹೆಚ್.ಎಸ್.ಡಿ.ಆರ್.ಪಿ) ರ ಅಡಿಯಲ್ಲಿ ಮೇಲಿನ ಕ್ರಮ ಸಂಖ್ಯೆ: 2 ರಲ್ಲಿ ತಿಳಿಸಿರುವ 3 ತಜ್ಞತೆಗಳನ್ನು ಹೊರತುಪಡಿಸಿ ಉಳಿದ ತಜ್ಞತೆಯಲ್ಲಿ ಮಾಸಿಕ ರೂ.5,000 ಗೌರವ ಧನ ನೀಡಿ ರಿಟ್ಯೈನರ್ ಶಿಪ್ ಆಧಾರದ ಮೇಲೆ ನೇಮಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಇದೇ ಕೆ.ಹೆಚ್.ಎಸ್.ಆರ್.ಡಿ.ಪಿ. ಯೋಜನೆಯಡಿ, ಸದರಿ ತಜ್ಞರು ಹೊರರೋಗಿ ವಿಭಾಗದಲ್ಲಿ ಕಾರ್ಯನಿರ್ವಹಿಸಿದ್ದಲ್ಲಿ ದಿನವೊಂದಕ್ಕೆ ರೂ. 1.000 ದಂತೆ ಗೌರವ ಧನ ನೀಡಲು ಅವಕಾಶ ಕಲ್ಪಿಸಲಾಗಿದೆ. ಆದರೆ ವಾರಕ್ಕೆ ಎರಡು ದಿನಕ್ಕೆ ಮಾತ್ರ ಅಂತಹ ಸೇವೆಯನ್ನು ಪಡೆಯಲು ಮಿತಿಗೊಳಿಸಲಾಗಿದೆ.

4. ಎಂ.ಬಿ.ಬಿ.ಎಸ್. ವೈದ್ಯರಿಗೆ ಅರವಳಿಕೆ ಹಾಗೂ ಸಿಜೇರಿಯನ್ ಶಸ್ತ್ರಚಿಕಿತ್ಸೆಗಳಿಗೆ ತರಬೇತಿ ನೀಡಲಾಗುತ್ತಿದ್ದು ಈ ಮೂಲಕ ಸ್ತ್ರೀ ರೋಗ ಹಾಗೂ ಅರವಳಿಕೆ ತಜ್ಞರ ಕೊರತೆಯನ್ನು ನೀಗಿಸಲು ಕ್ರಮವಹಿಸಲಾಗಿದೆ.
5. ಇಲಾಖೆಯಲ್ಲಿ ಖಾಲಿ ಇರುವ 562 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳನ್ನು ನೇಮಕಾತಿ ಮಾಡಲು ಕರ್ನಾಟಕ ಲೋಕಸೇವಾ ಅಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದ್ದು, ನೇಮಕಾತಿ ಪ್ರಕ್ರಿಯೆ ಮುಗಿದ ನಂತರ ಆದ್ಯತಾನುಸಾರ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು.
6. ವಿಶೇಷ ನೇರ ನೇಮಕಾತಿ ಸಮಿತಿಯ ಮುಖಾಂತರ 5021 ಅರೆವೈದ್ಯಕೀಯ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ವಹಿಸಲಾಗುವುದು.
7. ಕರ್ನಾಟಕ ಲೋಕ ಸೇವಾ ಆಯೋಗದ ಮೂಲಕ 224 ಪ್ರಥಮ ದರ್ಜೆ ಸಹಾಯಕರ ಹುದ್ದೆಗಳನ್ನು ಭರ್ತಿ ಮಾಡಲು ಪ್ರಸ್ತಾವನೆ ಸಲ್ಲಿಸಲಾಗಿದೆ.
8. ಪ್ರಸ್ತುತ ಗ್ರೂಪ್–ಡಿ ನೌಕರರ ವೃಂದದಲ್ಲಿ ನೇಮಕಾತಿ ಮಾಡಲು ನಿಷೇಧವಿದ್ದು, ಅವಶ್ಯವಿರುವೆಡೆ ಬಾಹ್ಯ ಮೂಲಗಳಿಂದ ಸೇವೆ ಪಡೆದು ನಿರ್ವಹಿಸಲು ಕ್ರಮವಹಿಸಲಾಗಿದೆ.

ಎಸ್.ಸಿ./ಎಸ್.ಟಿ. ವರ್ಗಗಳ ನಿರ್ದೇಶನಾಲಯ ಸ್ಥಾಪನೆ

422 (615) ಶ್ರೀ ಮಂಜು.ಎ. (ಅರಕಲಗೂಡು) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ ಸ್ಥಾಪನೆ ಆಗಿದ್ದು ಯಾವಾಗ;

ಆ) ನಿರ್ದೇಶನಾಲಯ ವೃಂದ ಮತ್ತು ನೇಮಕಾತಿ ನಿಯಮ ರಚಿಸಲಾಗಿದೆಯೇ;

ಇ) ರಚಿಸದಿದ್ದಲ್ಲಿ, ಯಾವಾಗ ರಚನೆ ಮಾಡಲಾಗುವುದು?

ಶ್ರೀ ಡಿ. ಸುಧಾಕರ್ (ಸಮಾಜ ಕಲ್ಯಾಣ ಸಚಿವರು) :

ಅ) 07–01–1999

ಆ) ಇಲ್ಲ.